ಈ) 16641

ಉ) 2732

ಊ) 1822.45 ಲಕ್ಷ ರೂ.ಗಳನ್ನು ಯೋಜನೆ ಶೀರ್ಷಿಕೆಯಲ್ಲಿ ಮತ್ತು 3569.59 ಲಕ್ಷ ರೂ.ಗಳನ್ನು ಯೋಜನೇತರ ಶೀರ್ಷಿಕೆಯಡಿ ಬಿಡುಗಡೆ ಮಾಡಲಾಗಿದೆ. ಘಟಕ ಕಾಲೇಜಿನ ಮತ್ತು ಸ್ನಾತಕೋತ್ತರ ಕೇಂದ್ರದ ಮತ್ತು ವಿಶ್ವವಿದ್ಯಾಲಯದ ಕಟ್ಟಡಗಳ ನಿರ್ಮಾಣ, ಗ್ರಂಥಾಲಯಕ್ಕೆ ಪುಸ್ತಕಗಳ ಖರೀದಿ, ಪ್ರಯೋಗಶಾಲಾ ಉಪಕರಣ ಹಾಗೂ ಗ್ಲಾಸ್ ವೇರ್‌ಗಳು, ಪೀಠೋಪಕರಣಗಳು ಮತ್ತು ಯಂತ್ರೋಪಕರಣಗಳನ್ನು ಖರೀದಿಸಿರುವುದು, ನೀರು ಸರಬರಾಜು ವ್ಯವಸ್ಥೆ.

ಋ) ಪರಿಶಿಷ್ಟ ಜಾತಿ - 985, ಪರಿಶಿಷ್ಟ ಪಂಗಡ - 209

ಶಿವಮೊಗ್ಗ ಜಿಲ್ಲೆಯಲ್ಲಿರುವ ಶಾಲಾ ಶಿಕ್ಷಕರ ನೇಮಕಾತಿ

1523 (1722) ಶ್ರೀ ಚಂದ್ರಶೇಖರಪ್ಪ.ಹೆಚ್.ಎಂ (ಶಿವಮೊಗ್ಗ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ

ಅ) ಶಿವಮೊಗ್ಗ ಜಿಲ್ಲೆಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಕ್ಷಕರನ್ನು ನೇಮಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು

ಆ) ಶಿವಮೊಗ್ಗ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದಲ್ಲಿ ಕಂಪ್ಯೂಟರ್ ಶಿಕ್ಷಣ ನೀಡುವ ಬಗ್ಗೆ ಸರಕಾರ ಹಾಕಿಕೊಂಡ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಗೂ ಸರ್ಕಾರಿ ಪ್ರೌಢ ಶಾಲೆಗಳಲ್ಲಿ 98 ಹುದ್ದೆಗಳು ಖಾಲಿಯಿರುತ್ತವೆ. ಶಿಕ್ಷಕರು ವಾಸ್ತವಿಕ ಅಗತ್ಯತೆ ನಿರ್ಧರಿಸಿದ ನಂತರ ನಿಯಮಾನುಸಾರ ಹುದ್ದೆಗಳನ್ನು ತುಂಬಲಾಗುವುದು.

ಆ) ಶಿವಮೊಗ್ಗ ಜಿಲ್ಲೆಯಲ್ಲಿ ಆಯ್ದ ಕೆಲವು ಪ್ರೌಢ ಶಾಲೆಗಳಲ್ಲಿ ಮುಂದಿನ ಶೈಕ್ಷಣಿಕ ವರ್ಷದಿಂದ ಕಂಪ್ಯೂಟರ್ ಶಿಕ್ಷಣ ನೀಡಲು ಅಗತ್ಯ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ ಹಾಗೂ ಮುಂದಿನ ಶೈಕ್ಷಣಿಕ ವರ್ಷದಿಂದ ಈ ಕಾರ್ಯಕ್ರಮವನ್ನು ಜಾರಿಗೆ ತರಲಾಗುವುದು. ಈಗಾಗಲೇ 12 ಪ್ರೌಢ ಶಾಲೆಗಳಿಗೆ ಕ್ಲಾಸ್ ಪ್ರಾಜೆಕ್ಟ್ ಅಡಿಯಲ್ಲಿ ಗಣಕ ಯಂತ್ರ ಸರಬರಾಜಾಗಿದ್ದು, ಈ ಶಾಲೆಗಳಲ್ಲಿ ಪ್ರಥಮ ಹಂತವಾಗಿ ಒಟ್ಟು 120 ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಬೇಸಿಗೆ ರಜೆಯಲ್ಲಿ 30 ದಿನಗಳ ತರಬೇತಿ ನೀಡಲಾಗಿದೆ. 2000-2001ನೇ ಸಾಲಿಗೆ ಒಟ್ಟು 50 ಜನ ಹೊಸದಾಗಿ ನೇಮಕಾತಿ ಹೊಂದಿದ್ದ ಪ್ರೊಬೇಷನರಿ ಮುಖ್ಯ ಶಿಕ್ಷಕರಿಗೆ ತರಬೇತಿ ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಶಿವಮೊಗ್ಗ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ವೈದ್ಯರ ಕೊರತೆ

1524 (1723) ಶ್ರೀ ಚಂದ್ರಶೇಖರಪ್ಪ.ಹೆಚ್.ಎಂ (ಶಿವಮೊಗ್ಗ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?